## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ 72ರಡಿ ಕೋರಿರುವ ಪ್ರಶ್ನೆಗೆ ಉತ್ತರ

**ವಿಷಯ:**

ಅನುದಾನ ರಹಿತ, ಅನುದಾನಿತ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಇನ್ನಿತರೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಎಸ್.ಸಿ/ಎಸ್.ಟಿ. ಹಾಗೂ ಓ.ಬಿ.ಸಿ. ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೀಡಲಾಗುವ ಶುಲ್ಕ ವಿನಾಯಿತಿ ಹಣವಾದ ಪ್ರವೇಶ, ಪರೀಕ್ಷೆ, ಬೋಧನೆ ಹಾಗೂ ಇತರೆ ಶುಲ್ಕಗಳನ್ನು ಆಯಾ ಕಾಲೇಜಿನ ಪ್ರಾಂಶುಪಾಲರ ಖಾತೆಗೆ ಇಲಾಖೆ ಮರು ಪಾವತಿ ಮಾಡದೆ, ಕಳೆದ ಎರಡು ವರ್ಷಗಳಿಂದ ವಿದ್ಯಾರ್ಥಿಗಳ ಖಾತೆಗೆ ನೇರವಾಗಿ ಜಮಾ ಮಾಡುತ್ತಿರುವುದರಿಂದ ಕಾಲೇಜಿಗೆ ಬರಬೇಕಾದ ಯಾವುದೇ ಶುಲ್ಕಗಳು ವಿದ್ಯಾರ್ಥಿಗಳಿಂದ ಸಂಸ್ಥೆಗಳಿಗೆ ಪಾವತಿಯಾಗುತ್ತಿಲ್ಲ. ಇದರಿಂದ ಕಾಲೇಜುಗಳ ನಿರ್ವಹಣೆಯು ತುಂಬಾ ಕಷ್ಟದಾಯಕವಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷದ ಮಿತಿಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿಗಳನ್ವಯ ಮಂಜೂರು ಮಾಡಲಾಗುತ್ತಿದೆ.

2018-19 ಹಾಗೂ ಪೂರ್ವದ ಸಾಲುಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇಲಾಖೆಯ SMIS ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗಿದೆ. 2019-20ನೇ ಸಾಲಿನಿಂದ ಇ-ಆಡಳಿತ ಇಲಾಖೆಯ ವತಿಯಿಂದ ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡಲಾಗುತ್ತಿರುವ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್(SSP) ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಮಂಜೂರು ಮಾಡಲಾದ ವಿದ್ಯಾರ್ಥಿವೇತನ ಮೊತ್ತವನ್ನು ಡಿ.ಬಿ.ಟಿ. ಪೋರ್ಟಲ್ ಮೂಲಕ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ.

2019-20 ಮತ್ತು 2020-21ನೇ ಸಾಲಿನಲ್ಲಿ ಮಂಜೂರಾದ ಶುಲ್ಕ ಮರುಪಾವತಿ ಮೊತ್ತದಲ್ಲಿ ವಿದ್ಯಾರ್ಥಿಯು ತಾನು ವ್ಯಾಸಂಗ ಮಾಡುತ್ತಿರುವ ಕಾಲೇಜಿಗೆ ಈಗಾಗಲೇ ಶುಲ್ಕ ಪಾವತಿ ಮಾಡಿದ್ದಲ್ಲಿ, ಸದರಿ ಮೊತ್ತವನ್ನು ವಿದ್ಯಾರ್ಥಿಯ ಖಾತೆಗೆ ಜಮೆ ಮಾಡಲು ಹಾಗೂ ಉಳಿದ ಮೊತ್ತವನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಖಾತೆಗೆ ಜಮೆ ಮಾಡಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಈ ಸಂಬಂಧ ತಂತ್ರಾಂಶದಲ್ಲಿ ಇ-ದೃಢೀಕರಣ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಈ ಸಂಬಂಧ ಕಾಲೇಜಿನಲ್ಲಿ ಇ-ದೃಢೀಕರಣ ಅಧಿಕಾರಿಗಳನ್ನು ನೇಮಿಸಲಾಗಿದ್ದು, ಸದರಿ ಇ-ದೃಢೀಕರಣ ಅಧಿಕಾರಿಗಳು ದೃಢೀಕರಣ ಮಾಡಿರುವ ದತ್ತಾಂಶಗಳಿಗೆ ಅನುಗುಣವಾಗಿ ಶುಲ್ಕ ಮರುಪಾವತಿ ಮೊತ್ತವನ್ನು ಜಮೆ ಮಾಡಲಾಗುತ್ತಿದೆ.

ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26ರ ವರೆಗೆ) ರ ಪುಟಸಂಖ್ಯೆ (11)ರ ಹಾಗೂ ಕ್ರಮ ಸಂಖ್ಯೆ (11) **Payment Mechanism** ನಲ್ಲಿ **11.1 The entire scholarship amount – both from State and Central Government – including the tuition fees, academic allowance and any other admissible allowance will be paid directly into the account of the students ONLY through DBT preferably**

**through an Aadhar Based Payment System (Aadhar Payment Bridge) from 2021-22** ಎಂದು ತಿಳಿಸಲಾಗಿರುತ್ತದೆ.

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, ಶೇಕಡ 60ರಷ್ಟು ಮೊತ್ತವನ್ನು ಕೇಂದ್ರ ಸರ್ಕಾರವೇ ಪಾವತಿಸುತ್ತಿರುವುದರಿಂದಲೂ ಹಾಗೂ ರಾಜ್ಯ ಸರ್ಕಾರ ಉಳಿದ ಶೇಕಡ 40 ರಷ್ಟು ಮಾತ್ರ ಭರಿಸುತ್ತಿರುವುದರಿಂದ, ಕಾರ್ಯಕ್ರಮ ಅನುಷ್ಠಾನದಲ್ಲಿ ರಾಜ್ಯವು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಈ ಸಂಬಂಧ ಕಡ್ಡಾಯವಾಗಿ ಪಾಲಿಸಬೇಕಾಗಿರುತ್ತದೆ.

ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26ರ ವರೆಗೆ) ರೀತ್ಯಾ 2021-22ನೇ ಸಾಲಿನಲ್ಲಿ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾದ ಸಂಪೂರ್ಣ ಮೊತ್ತವನ್ನು ವಿದ್ಯಾರ್ಥಿಯ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ.

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯವತಿಯಿಂದ** ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ನೆರವಾಗುವ ದೃಷ್ಟಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ. ಸದರಿ ಯೋಜನೆಯಡಿ ಸರ್ಕಾರವು, ಸರ್ಕಾರದ ಕಾಲೇಜುಗಳಿಗೆ ನಿಗದಿಪಡಿಸಿದ ದರಗಳಂತೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಶುಲ್ಕಗಳನ್ನು ಮರುಪಾವತಿ ಮಾಡಲಾಗುತ್ತಿದೆ.

1. ಬೋಧನಾ ಶುಲ್ಕ
2. ಪ್ರಯೋಗಾಲಯ ಶುಲ್ಕ (ಯಾವ ಕೋರ್ಸುಗಳಲ್ಲಿ ಪ್ರಯೋಗಾಲಯ ಕಡ್ಡಾಯವಿದೆಯೋ ಆ ಕೋರ್ಸುಗಳಿಗೆ ಮಾತ್ರ)
3. ಪರೀಕ್ಷಾ ಶುಲ್ಕ
4. ಕ್ರೀಡಾ ಶುಲ್ಕ
5. ಗ್ರಂಥಾಲಯ ಶುಲ್ಕ

ಅರ್ಹತೆಗಳು:

1. ಈ ಸೌಲಭ್ಯವನ್ನು ಪಡೆಯಲು ವಿದ್ಯಾರ್ಥಿಯ ತಂದೆ-ತಾಯಿ/ಪೋಷಕರ ಕುಟುಂಬದ ವಾರ್ಷಿಕ ವರಮಾನ ಈ ಕೆಳಗೆ ನಿಗದಿಪಡಿಸಿದ ಗರಿಷ್ಠ ಮಿತಿಯೊಳಗೆ ಇರಬೇಕು.

- ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ ಹಾಗೂ
- ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿದ ಮತ್ತು ಎಲ್ಲಾ ಧರ್ಮಗಳ, ಜಾತಿಗಳ ಹಾಗೂ ಸಮುದಾಯಗಳ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ
- ಸಮಾಜ ಕಲ್ಯಾಣ/ ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ.

ಸರ್ಕಾರದ ಆದೇಶದನುಸಾರ 2019-20ನೇ ಸಾಲಿನವರೆಗೆ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯಡಿಯಲ್ಲಿ ಸರ್ಕಾರದ ಕಾಲೇಜುಗಳಿಗೆ ನಿಗದಿಪಡಿಸುವ ಶುಲ್ಕದ ದರಗಳನ್ನು ಸಂಬಂಧಪಟ್ಟ ವಿದ್ಯಾರ್ಥಿಯ ಕಾಲೇಜಿನ ಪ್ರಾಂಶುಪಾಲರ ಖಾತೆಗೆ ಜಮೆಗೊಳಿಸಲಾಗುತ್ತಿತ್ತು.

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳ ಕೇಂದ್ರ ಸರ್ಕಾರದ ಮಾರ್ಗಸೂಚಿ ದಿನಾಂಕ: 23.12.2020 ರಲ್ಲಿ ಕಡ್ಡಾಯವಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ

ಮತ್ತು ವಿದ್ಯಾರ್ಥಿವೇತನವನ್ನು ಡಿಬಿಟಿ ಮುಖಾಂತರ ವಿದ್ಯಾರ್ಥಿಗಳ ಖಾತೆಗೆ ಪಾವತಿಸಲು ಸೂಚಿಸಲಾಗಿರುತ್ತದೆ. ಅದರಂತೆ ಕರ್ನಾಟಕ ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 23 ಬಿಎಂಎಸ್ 2021, ದಿನಾಂಕ: 08.02.2021 ರಲ್ಲಿ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ದಿನಾಂಕ: 05.10.2013 ಕ್ಕೆ ತಿದ್ದುಪಡಿ ಮಾಡಿ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯಡಿ ಮಂಜೂರಾದ ಶುಲ್ಕಗಳನ್ನು ನಿಯಮಾನುಸಾರ ಆಧಾರ ಜೋಡಣೆ ಆಗಿರುವ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಆರ್ಥಿಕ ವರ್ಷದ ಒಳಗಾಗಿ ಒಂದೇ ಕಂತಿನಲ್ಲಿ ಜಮಾ ಮಾಡಬೇಕೆಂದು ಆದೇಶಿಸಲಾಗಿರುತ್ತದೆ.

ಸರ್ಕಾರದ ಆದೇಶದಂತೆ 2020-21ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯಡಿಯಲ್ಲಿ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಸರ್ಕಾರಿ ಕಾಲೇಜುಗಳಲ್ಲಿ ನಿಗದಿಪಡಿಸಿರುವ ದರಗಳಂತೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಆಧಾರ್ ಸೀಡಿಂಗ್ ಅಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮುಖಾಂತರ ಶುಲ್ಕ ಮರುಪಾವತಿ ಜಮೆ ಮಾಡಲಾಗುತ್ತಿರುತ್ತದೆ.

ಅದರಂತೆ, 2020-21ನೇ ಸಾಲಿನಲ್ಲಿ ಅರ್ಹರಿರುವ 742445 ವಿದ್ಯಾರ್ಥಿಗಳಿಗೆ ರೂ.443.70 ಕೋಟಿಗಳನ್ನು ಡಿಬಿಟಿ ಮುಖಾಂತರ ಜಮೆ ಮಾಡಲಾಗಿದ್ದು ಉಳಿದ ವಿದ್ಯಾರ್ಥಿಗಳಿಗೆ ಮಂಜೂರಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. 2021-22ನೇ ಸಾಲಿಗೆ ಕೋವಿಡ್ ಕಾರಣದಿಂದ ಕಾಲೇಜುಗಳಲ್ಲಿ ಭೌತಿಕ ತರಗತಿಗಳು ತಡವಾಗಿ ಪ್ರಾರಂಭವಾಗಿದ್ದು ಪ್ರವೇಶ ಪ್ರಕ್ರಿಯೆ ಇನ್ನು ನಡೆಯುತ್ತಿರುವುದರಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿ ಅರ್ಜಿ ಸಲ್ಲಿಸಲು ದಿನಾಂಕ: 31.03.2022ರವರೆಗೆ ಅವಕಾಶ ಮಾಡಿಕೊಡಲಾಗಿದೆ.

ಸಕಇ 243 ಪಕವಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.